ಜಯಕಿರಣ ದಿನಪತ್ರಿಕೆ

22.02.2024

# 132 ಕೋಟಿ ವೆಚ್ಚದ ಹಾಸ್ಟೆಲ್ ಪ್ರಧಾನಿಯಿಂದ ಲೋಕಾರ್ಪಣೆ

(ಜಯಕಿರಣ ವರದಿ)



ಮಂಗಳೂರು; ಸುರತ್ಕಲ್ ರಾಷ್ಟ್ರೀಯ ತಾಂತ್ರಿಕ ಮಹಾವಿದ್ಯಾಲಯ (ಎನ್‌ಐಟಿಕೆ)ದಲ್ಲಿ ಒಟ್ಟು 132 ಕೋಟಿ ರು.ಗಳಲ್ಲಿ ನಿರ್ಮಿಸಲಾದ ಮೂರು ವಿದ್ಯಾರ್ಥಿ ಹಾಸ್ಟೆಲ್‌ನ ಪ್ರಧಾನ ಮಂತ್ರಿ ನರೇಂದ್ರ ಮೋದಿ ಮಂಗಳವಾರ ಐಐಎಂ ಜಮ್ಮುವಿನಿಂದ ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಿದರು.

ವಿವಿಧ ಯೋಜನೆಗಳ ಲೋಕಾರ್ಪಣೆ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಶಿಕ್ಷಣ ಮತ್ತು ಕೌಶಲ್ಯ ಕ್ಷೇತ್ರದಲ್ಲಿ ಭಾರತ ದಾಪುಗಾಲು ಇಡುತ್ತಿದೆ. ದೇಶದಲ್ಲಿ ದಾಖಲೆ ಸಂಖ್ಯೆಯಲ್ಲಿ ಶಾಲಾ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳನ್ನು ನಿರ್ಮಿಸಲಾಗಿದೆ ಎಂದು ಉನ್ನತ ಶಿಕ್ಷಣ ಕ್ಷೇತ್ರದ ಸಾಧನೆಗಳತ್ತ ಬೊಟ್ಟು ಮಾಡಿದರು.

## 588 ಕೋಟಿ ಅನುದಾನ..

ಈ ಸಂದರ್ಭ ಎನ್‌ಐಟಿಕೆಯಲ್ಲಿ ದ.ಕ. ಸಂಸದ ನಳಿನ್ ಕುಮಾರ್ ಕಟೀಲ್ ದೀಪ ಬೆಳಗಿಸಿ ಉದ್ಘಾಟಿಸಿ, ದ.ಕ. ಲೋಕಸಭಾ ಕ್ಷೇತ್ರಕ್ಕೆ ಕೇಂದ್ರದಿಂದ ಕಳೆದ 10 ವರ್ಷಗಳಲ್ಲಿ 79 ಸಾವಿರ ಕೋಟಿ ರು. ಅನುದಾನ ಲಭಿಸಿದೆ. ಈ ಪೈಕಿ ಸುರತ್ಕಲ್ ಎನ್‌ಐಟಿಕೆಗೆ 588 ಕೋಟಿ ರು. ಬಿಡುಗಡೆಗೊಂಡಿದೆ ಎಂದರು.

ಮಂಗಳೂರು ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗಕ್ಕೆ 20 ಕೋಟಿ ರು. ಬಿಡುಗಡೆಗೊಳಿಸಲಾಗಿದೆ. ಸ್ವಾತಂತ್ರ್ಯೋತ್ಸವದ ಅಮೃತ ಕಾಲದಲ್ಲಿ ಎಲ್ಲ ರಂಗಗಳಲ್ಲೂ ದೇಶ ಅಭಿವೃದ್ಧಿ ಕಾಣಬೇಕು ಎಂಬುದು ಪ್ರಧಾನಿಗಳ ಕನಸು. ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸುವ ಮೂಲಕ ಶೈಕ್ಷಣಿಕವಾಗಿ ಪರಿವರ್ತನೆ ತರಲಾಗುತ್ತಿದೆ ಎಂದರು.

ಎನ್‌ಐಟಿಕೆ ನಿರ್ದೇಶಕ ಪ್ರೊ. ಬಿ.ರವಿ ಮಾತನಾಡಿ, ಎನ್‌ಐಟಿಕೆಯಲ್ಲಿ ಸಮಾಜಮುಖಿ ಶಿಕ್ಷಣ ಸಿಗುತ್ತಿದ್ದು, ಇದು ದೇಶದ ಭದ್ರ ಬುನಾದಿಗೆ ಅತ್ಯಗತ್ಯವಾಗಿದೆ. ದೇಶದಲ್ಲಿ ಸುಸ್ಥಿರ ಕ್ಯಾಂಪಸ್ ಪೈಕಿ ಐಐಟಿಗಳಿಗಿಂತ ಮುಂಚೂಣಿಯಲ್ಲಿ ಎರಡನೇ ಸ್ಥಾನದಲ್ಲಿ ಸುರತ್ಕಲ್ ಎನ್‌ಐಟಿಕೆ ಇದೆ ಎಂಬುದು ಹೆಗ್ಗಳಿಕೆಯ ಸಂಗತಿ. ಸಂಶೋಧನೆ, ಆರೋಗ್ಯ ಸ್ನೇಹಿ ಪರಿಸರಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು.ಡೀನ್ ಚಿತ್ತರಂಜನ್ ಹೆಗ್ಡೆ ಪ್ರಾಸ್ತಾವಿಕ ಮಾತನಾಡಿದರು. ಪಾಲಿಕೆ ಸದಸ್ಯೆ ಶೋಭಾ ರಾಣಿ, ಶ್ವೇತಾ, ವಿಧಾನ ಪರಿಷತ್ ಮಾಜಿ ಸದಸ್ಯ ಕ್ಯಾ. ಗಣೇಶ್ ಕಾರ್ಣಿಕ್ ಉಪಸ್ಥಿತರಿದ್ದರು. ಪ್ರೊ. ಪುಷ್ಪರಾಜ್ ಶೆಟ್ಟಿ ವಂದಿಸಿದರು.